ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ 18-09-2024 ರಂದು ಬೋಧಿಸಲಾಯಿತು.

(ಸಾಕ್ಷಿದಾರರಿಗೆ ಕನ್ನಡ ಬರುತ್ತಿಲ್ಲವಾಗಿದ್ದು ಕೊಂಕಣಿ ಭಾಷೆ ಬಲ್ಲವರಾಗಿದ್ದು ಶ್ರೀಮತಿ ಆರ್ ಜಿ ಎಚ್ ವಕೀಲರು ಸಾಕ್ಷಿ ಕೊಂಕಣಿಯಲ್ಲಿ ಹೇಳಿದ್ದನ್ನು ಕನ್ನಡದಲ್ಲಿ ತರ್ಜುಮೆ ಮಾಡಿ ಹೇಳುವುದಾಗಿ ಪ್ರಮಾಣ ವಚನ ಸ್ವೀಕರಿಸಿ ಸಾಕ್ಷಿ ಕೊಂಕಣಿಯಲ್ಲಿ ಹೇಳಿದ ಸಾಕ್ಷವನ್ನು ಸದ್ರಿಯವರು ಕನ್ನಡಕ್ಕೆ ತರ್ಜುಮೆ ಮಾಡಿ ಹೇಳಿದ್ದನ್ನು ರೆಕಾರ್ಡ ಮಾಡಿಕೊಳ್ಳಲಾಯಿತು)

<u>ಪಾಟೀ ಸವಾಲುಃ 1 ನೇ ಪ್ರತಿವಾದಿ ಪರ ಶ್ರೀ ವಿ ಎ ಟಿ ನ್ಯಾಯವಾದಿರವರಿಂದಃ</u>

ಪ್ರತಿವಾದಿಯರು ನಾನು ಮನೆಯನ್ನು ನಿರ್ಮಾಣ ಮಾಡುವ ಕಾಲಕ್ಕೆ ಬಂದು ನಿಲ್ಲಿಸಿ ಎಂದು ಸೂಚಿಸಿದ್ದರಿಂದ ಅವರನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿರುತ್ತೇನೆ. ಸದರಿ ವಿಷಯವನ್ನು ನಾನು ಇಂದೇ ಮೊದಲಬಾರಿ ನ್ಯಾಯಾಲಯದಲ್ಲಿ ಹೇಳುತ್ತಿದ್ದು, 1 ನೇ ಪ್ರತಿವಾದಿ ಸಂಸ್ಥೆಯವರು ಮನೆ ಕಾಮಗಾರಿಯನ್ನು ನಿಲ್ಲಿಸಲು ಸೂಚಿಸಿದ ವಿಷಯವನ್ನು ನನ್ನ ವಾದ ಪತ್ರದಲ್ಲಿ ನಮೂದಿಸಿರುವುದಿಲ್ಲ ಎಂದರೆ ಸರಿಯಲ್ಲ. ನನ್ನ ವಾದ ಪತ್ರದಲ್ಲಿ ಆ ರೀತಿ ಯಾವುದೇ ನಮೂದು ಮಾಡದೇ ಇದ್ದರೂ ಸಹಿತ ನಮೂದಿಸಿರುತ್ತೇನೆ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. 2 ನೇ ಪ್ರತಿವಾದಿಯು ನಗರಸಭೆ ಕಾರವಾರ ಇವರಿಗೆ ನಾನು ದಾರಿಯನ್ನು ಬಂದ್ ಮಾಡಿದ್ದುದರ ವಿಚಾರವಾಗಿ ತಕರಾರು ಅರ್ಜಿಯನ್ನು ನೀಡಿರುತ್ತಾರೆ ಎಂದರೆ ಸರಿಯಲ್ಲ. ನಾನು ಅನಧಿಕೃತವಾಗಿ ಕಟ್ಟಡವನ್ನು ನಿರ್ಮಾಣ ಮಾಡುತ್ತಿದ್ದೇನೆ ಎಂದು ನಗರಸಭೆ ಕಾರವಾರ ಇವರು ನನಗೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿ. ಸದರಿ ನೋಟೀಸ್ ನ್ನು ನಾನು ನ್ಯಾಯಾಲಯದಲ್ಲಿ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ಸದರಿ ದಾವೆಯನ್ನು ಮಾಡುವ ಪೂರ್ವದಲ್ಲಿ ನಾನು ಅನಧಿಕೃತವಾಗಿ ಕಟ್ಟಡವನ್ನು ನಿರ್ಮಾಣ ಮಾಡುತ್ತಿದ್ದೇನೆ ಎಂದು ನಗರಸಭೆ ಕಾರವಾರ ಇವರು ನನಗೆ ನೋಟೀಸ್ ನೀಡಿರುತ್ತಾರೆ ಎಂದರೆ ಸರಿ. ಸಾಕ್ಷಿಯು ಸ್ವತಃ ನಾನು ಯಾವುದೇ ಹೊಸಕಟ್ಟಡ ನಿರ್ಮಾಣ ಮಾಡಿರುವುದಿಲ್ಲ ಬದಲಾಗಿ ಇದ್ದ ಮನೆಯಲ್ಲಿ ನಿರ್ಮಾಣ ಮಾಡುತ್ತಿರುವಾಗ ನೋಟೀಸ ನೀಡಿರುತ್ತಾರೆ ಎಂದು ಸಾಕ್ಷ್ಯ ನುಡಿಯುತ್ತಾರೆ.

2. ನಗರಸಭೆ ಕಾರವಾರ ಇವರು 18 ಅಡಿ ಅಗಲ ವಿಸ್ತೀರ್ಣದ ರಸ್ತೆ ನಿರ್ಮಾಣ ಮಾಡುವ ಸಲುವಾಗಿ ಯಾವತ್ತೂ ದಾವಾಸ್ತಿಯ ಮೂಲಕ ಹೋಗಿರುವುದಿಲ್ಲ ಎಂದರೆ ಸರಿ. ಸಾಕ್ಷಿಯು ಸ್ವತಃ 2 ನೇ ಪ್ರತಿವಾದಿಯು 18 ಅಡಿ ಅಗಲದ ರಸ್ತೆಯನ್ನು ನಮ್ಮ ಜಮೀನಿನಲ್ಲಿ ಬಿಡುವಂತೆ ಜಗಳ ಮಾಡಿರುತ್ತಾರೆ ಎಂದು ಸಾಕ್ಷ್ಯ ನುಡಿಯುತ್ತಾರೆ. ಸದರಿ ದಾವೆಯನ್ನು ನಾನು 2 ನೇ ಪ್ರತಿವಾದಿ ನನಗೆ ತೊಂದರೆ ಕೊಡುತ್ತಿದ್ದಾನೆ ಎನ್ನುವ ಉದ್ದೇಶದಿಂದ ಮಾತ್ರ ಹೂಡಿರುತ್ತಾನೆ ಎಂದರೆ ಸರಿಯಲ್ಲ. ಸಾಕ್ಷಿಯು ಸ್ವತಃ 1 ನೇ ಪ್ರತಿವಾದಿಯು ನಾನು ಮನೆ ರಿಪೇರಿ ಮಾಡುತ್ತಿದ್ದನ್ನು ಬಂದ್

ಮಾಡಲು ಬಂದಿದ್ದರಿಂದ 1 ನೇ ಪ್ರತಿವಾದಿಯ ವಿರುದ್ದವೂ ಸಹ ಈ ದಾವೆಯನ್ನು ಹೂಡಿರುತ್ತೇನೆ ಎಂದು ಸಾಕ್ಷ್ಯ ನುಡಿಯುತ್ತಾರೆ. 1 ನೇ ಪ್ರತಿವಾದಿಯ ವಿರುದ್ಧ ದಾವೆಯನ್ನು ಹೂಡಲು ಯಾವುದೇ ದಾವಾ ಕಾರಣ ಉಂಟಾಗಿರುವುದಿಲ್ಲ ಎಂದರೆ ಸರಿಯಲ್ಲ. 1 ನೇ ಪ್ರತಿವಾದಿ ಹಾಗೂ ಈ ದಾವೆಗೆ ಯಾವುದೇ ಸಂಬಂದ ಇರುವುದಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇರುವುದಿಲ್ಲ.

(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಹಿ ಇದೆ .**
**ಸಿವಿಲ್ ನ್ಯಾಯಾಧೀಶರು ಕಾರವಾರ**